<u>**ಕರ್ನಾಟಕ ಸರ್ಕಾರದ ನಡವಳಿ**</u>

ವಿಷಯ: ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗೆ ಒಳಪಡಲಿರುವ 14 ಗ್ರಾಮ ಪಂಚಾಯತಿ ಗ್ರಂಥಾಲಯಗಳನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯ ವ್ಯಾಪ್ತಿಗೆ ನೀಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಇಡಿ/64/ಎಲ್‌ಐಬಿ/2015, ದಿನಾಂಕ: 26.02.2019.
2. ಸರ್ಕಾರದ ಆದೇಶ ಸಂಖ್ಯೆ:ಇಡಿ/64/ಎಲ್ ಐಬಿ/2015, ದಿನಾಂಕ: 24.07.2019
3. ಸರ್ಕಾರದ ಆದೇಶ ಸಂಖ್ಯೆ:ಕೆಪಿಆರ್/ಡಿಇವಿ/96/2020, ಬೆಂಗಳೂರು, ದಿನಾಂಕ:27.11.2020.
4. ಸರ್ಕಾರದ ಆದೇಶ ಸಂಖ್ಯೆ:ಕೆಪಿಆರ್‌ಸಿ/ಡಿಇವಿ/79/2021, ಬೆಂಗಳೂರು, ದಿನಾಂಕ:19.02.2021.
5. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು. ಇವರ ಪತ್ರ ಸಂಖ್ಯೆ:ಸಾಗ್ರಂಇ/ನಿಕ/ಬಿ3/06 ಪು.ಪ.ನ.ಮ/2021-22 (ಭಾಗ-2) /1617,1621, ದಿನಾಂಕ: 03.08.2021.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2)ರಲ್ಲಿ ರಾಜ್ಯದಲ್ಲಿನ ಗ್ರಾಮ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ 5633 ಗ್ರಂಥಾಲಯಗಳನ್ನು ಶಿಕ್ಷಣ ಇಲಾಖೆಯ ಅಧೀನದ ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯಿತಿಗಳ ಆಡಳಿತ ವ್ಯಾಪ್ತಿಗೆ ವರ್ಗಾಯಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪಿಯಡಿ ಬರುವ 5633 ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಪೈಕಿ ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತನೆಯಾದ ಗ್ರಾಮ ಪಂಚಾಯಿತಿಗಳ 11 ಗ್ರಂಥಾಲಯಗಳನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಅಧೀನದ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ವರ್ಗಾಯಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(4)ರಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಡಿ ಬರುವ 5633 ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಪೈಕಿ ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತನೆಯಾದ ಗ್ರಾಮ ಪಂಚಾಯಿತಿಗಳ 10 ಗ್ರಂಥಾಲಯಗಳನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಅಧೀನದ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ವರ್ಗಾಯಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(5)ರಲ್ಲಿ ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ ಇವರು ಜಿಲ್ಲಾ ಕೇಂದ್ರ ಗ್ರಂಥಾಲಯ, ಮೈಸೂರು ನಗರ, ಜಿಲ್ಲಾ ಕೇಂದ್ರ ಗ್ರಂಥಾಲಯ, ಬೆಂಗಳೂರು ಹಾಗೂ ಜಿಲ್ಲಾ ಕೇಂದ್ರ ಗ್ರಂಥಾಲಯ ಯಾದಗಿರಿ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿಗಳನ್ನು ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತನೆಯಾಗಿರುವುದರಿಂದ ಈ ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ 14 ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ವರ್ಗಾಯಿಸುವಂತೆ ಕೋರಲಾಗಿರುತ್ತದೆ.

ಮೇಲಿನ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ , ಈ ಕೆಳಕಂಡಂತೆ ಆದೇಶಿದೆ.

<u>**ಸರ್ಕಾರದ ಆದೇಶ ಸಂಖ್ಯೆ: ಕೆಪಿಆರ್‌ಸಿ/ಡಿಇವಿ/532/2021, ಬೆಂಗಳೂರು, ದಿನಾಂಕ: 01.04.2022**</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೈಸೂರು, ಬೆಂಗಳೂರು ನಗರ ಮತ್ತು ಯಾದಗಿರಿ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯಿತಿಗಳು ನಗರ ಸ್ಥಳೀಯ ಸಂಸ್ಥೆಗಳಾಗಿ ಪರಿವರ್ತನೆಯಾಗಿರುವುದರಿಂದ, ಈ ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತಿದ್ದ ಕೆಳಕಂಡ 14 ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ಅಧೀನದ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ವರ್ಗಾಯಿಸಿ ಆದೇಶಿಸಿದೆ.

| ಕ್ರ.ಸಂ. | ಜಿಲ್ಲೆಯ ಹೆಸರು | ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಹೆಸರು |
|---|---|---|
| 1. | ಮೈಸೂರು | 1. ಕಡಕೊಳ |
| | | 2. ಹೊಸಹುಂಡಿ |
| | | 3. ಶ್ರೀರಾಂಪುರ |
| | | 4. ಬೋಗಾದಿ |
| | | 5. ರಮ್ಮನಹಳ್ಳಿ |
| | | 6. ಹಂಚ್ಯಾ |
| | | 7. ಬೆಳವಾಡಿ |
| | | 8. ಹಿನಕಲ್ |
| | | 9. ಕೂರ್ಗಳ್ಳಿ |
| 2. | ನಗರ ಜಿಲ್ಲಾ ಕೇಂದ್ರ ಗ್ರಂಥಾಲಯ, ಬೆಂಗಳೂರು | 10. ಹುಣಸಮಾರನಹಳ್ಳಿ |
| | | 11. ಸೊಣ್ಣಪ್ಪನಹಳ್ಳಿ |
| | | 12. ಚಿಕ್ಕಬಾಣಾವಾರ |
| | | 13. ಸೋಮಶೆಟ್ಟಿಹಳ್ಳಿ |
| 3 | ಯಾದಗಿರಿ | 14. ಹುಣಸಗಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಎಂ.ಎಂ. 1/4/22

**(ಎಂ.ಎಂ.ರಾಜು)**
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

1/4/22

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಆಯುಕ್ತರು, ಪಂಚಾಯತ್ ರಾಜ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
5. ನಿರ್ದೇಶಕರು, ಟಿ.ಎನ್.ಎಂ.ಸಿ., ಖಜಾನೆ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಮೈಸೂರು, ಬೆಂಗಳೂರು ನಗರ ಮತ್ತು ಯಾದಗಿರಿ ಜಿಲ್ಲಾ ಪಂಚಾಯಿತಿಗಳು.(ಆಯಾ ಜಿಲ್ಲಾ ವ್ಯಾಪ್ತಿಯಲ್ಲಿನ ಸಂಬಂಧಪಟ್ಟ ತಾಲ್ಲೂಕು ಪಂಚಾಯಿತಿ ಗ್ರಾಮ ಪಂಚಾಯಿತಿಗಳಿಗೆ ಈ ಆದೇಶದ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಿದೆ).
7. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, 4ನೇ ಮಹಡಿ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
8. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
9. ಮಾಹಿತಿ ಕೇಂದ್ರ/ ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು ಮಾಹಿತಿಗಾಗಿ:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ರವರ ಆಪ್ತ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಾ ಕಡತಕ್ಕೆ.